## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 313

ಉತ್ತರಿಸಬೇಕಾದ ದಿನಾಂಕ : 17.07.2019

ಸದಸ್ಯರ ಹೆಸರು : ಶ್ರೀ ಎನ್. ಎಸ್. ಬೋಸ್ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ | ರಾಯಚೂರಿನಲ್ಲಿ ನಿರ್ಮಿಸಿರುವ ಮಹಾತ್ಮಗಾಂಧಿ ಕ್ರೀಡಾಂಗಣದ ಕಾಮಗಾರಿಯು ಪೂರ್ತಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಸದರಿ ಕಾಮಗಾರಿಗೆ ಖರ್ಚಾಗಿರುವ ಅನುದಾನ ಎಷ್ಟು? | 1) ರಾಯಚೂರಿನಲ್ಲಿ ನಿರ್ಮಿಸಿರುವ ಮಹಾತ್ಮಗಾಂಧಿ ಕ್ರೀಡಾಂಗಣದ ಗ್ಯಾಲರಿ ಪೂರ್ಣಗೊಂಡಿದ್ದು, ಕ್ರೀಡಾಂಗಣದ ನೆಲ ಮಟ್ಟ ಮಾಡುವ ಕಾರ್ಯ ಪ್ರಗತಿಯಲ್ಲಿದೆ.<br>2) ಗ್ಯಾಲರಿ ನಿರ್ಮಾಣದ ಉದ್ದೇಶಕ್ಕಾಗಿ ರೂ 308.11 ಲಕ್ಷಗಳನ್ನು ಸರ್ಕಾರ ವೆಚ್ಚ ಮಾಡಿದೆ. ಕ್ರೀಡಾಂಗಣ ನಿರ್ಮಾಣ, ಒಳ ಚರಂಡಿ, ಕ್ರೀಡಾಂಗಣದಲ್ಲಿ ಪಾರ್ಕಿಂಗ್ ವ್ಯವಸ್ಥೆ ಮತ್ತು ಇತರೆ ಬಾಕಿ ಕಾಮಗಾರಿಗಳಿಗಾಗಿ ರೂ 402.84 ಲಕ್ಷಗಳನ್ನು ಮೀಸಲಿಡಲಾಗಿದೆ.<br>3) ಪೆವಿಲಿಯನ್ ಕಟ್ಟಡ ನಿರ್ಮಾಣ ಕಾಮಗಾರಿ ರೂ 165.66 ಲಕ್ಷಗಳ ವೆಚ್ಚದಲ್ಲಿ ಪೂರ್ಣಗೊಂಡಿದೆ.<br>4) ಒಳಾಂಗಣ ಕ್ರೀಡಾಂಗಣ ನಿರ್ಮಾಣಕ್ಕಾಗಿ ಹೆಚ್.ಕೆ.ಆರ್.ಡಿ.ಬಿ. ರೂ 198.35 ಲಕ್ಷಗಳ ಅನುದಾನ ನೀಡಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.<br>5) ಸದರಿ ಕಾಮಗಾರಿಗಳನ್ನು ಹೆಚ್.ಕೆ.ಆರ್.ಡಿ.ಬಿ. ಅನುದಾನದಿಂದ ಕೈಗೆತ್ತಿಕೊಳ್ಳಲಾಗಿದ್ದು, ಪ್ರಾದೇಶಿಕ ಆಯುಕ್ತರು ಪ್ರತಿ ತಿಂಗಳು ಕಾಮಗಾರಿ ಪ್ರಗತಿ ಪರಿಶೀಲನೆ ಕೈಗೊಳ್ಳುತ್ತಿದ್ದಾರೆ. |
| ಆ | ಮಹಾತ್ಮಗಾಂಧಿ ಕ್ರೀಡಾಂಗಣದ ಕಾಮಗಾರಿಗೆ ಸರ್ಕಾರದಿಂದ ನೀಡಿರುವ ಅನುದಾನ ಎಷ್ಟು ಹಾಗೂ ಹೆಚ್.ಕೆ.ಆರ್.ಡಿ.ಬಿ. ವತಿಯಿಂದ ನೀಡಿರುವ ಅನುದಾನ ಎಷ್ಟು? | ಸದರಿ ಕಾಮಗಾರಿಯನ್ನು ಸಂಪೂರ್ಣವಾಗಿ ಹೈದ್ರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅನುದಾನದಿಂದ ಕೈಗೆತ್ತಿಕೊಳ್ಳಲಾಗಿದ್ದು, ಇಲ್ಲಿಯವರೆಗೆ ಒಟ್ಟಾರೆ ರೂ 1074.96 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ. |

ವೈಎಸ್ ಡಿ-/23/2019

(ಕೆ. ಎಸ್. ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.